**Akashvani : Bangalore**
**National Bulletin In Kannada**
**25.05.2024 / 19.35 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**<><*<><>*><>**

ಮುಖ್ಯಾಂಶಗಳು

**೧. ಲೋಕಸಭಾ ಚುನಾವಣೆಯ ೬ನೇ ಹಂತಕ್ಕೆ ನಾಳೆ ಮತದಾನ**

**೨. ಚುನಾವಣಾ ಆಯೋಗದ ವೆಬ್‌ಸೈಟ್‌ನಲ್ಲಿ ಮತಗಟ್ಟೆವಾರು ಅಂಕಿ-ಅಂಶ ಪ್ರಕಟಿಸುವಂತೆ ಕೋರಿ ಅರ್ಜಿ ಸಲ್ಲಿಕೆ; ಮಧ್ಯಂತರ ಆದೇಶ ನೀಡಲು ಸುಪ್ರೀಂ ನಕಾರ**

**೩. ಮಾನನಷ್ಟ ಮೊಕದ್ದಮೆ ಪ್ರಕರಣದಲ್ಲಿ ಸಾಮಾಜಿಕ ಕಾರ್ಯಕರ್ತೆ ಮೇಧಾ ಪಾಟ್ಕರ್ ಅವರನ್ನು ದೋಷಿ ಎಂದು ಘೋಷಿಸಿದ ದೆಹಲಿ ನ್ಯಾಯಾಲಯ**

**೪. ಇನ್ನು ದೂರದರ್ಶನ ಕಿಸಾನ್ ಚಾನಲ್‌ನಲ್ಲಿ ಕೃತಕ ಬುದ್ಧಿಮತ್ತೆ ನಿರೂಪಕರಿಂದ ಸುದ್ದಿ ವಾಚನ**

**೫. ಐಪಿಎಲ್ ಕ್ರಿಕೆಟ್: ಕ್ವಾಲಿಫೈಯರ್ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ - ಸನ್ ರೈಸರ್ಸ್ ಹೈದರಾಬಾದ್ ಮುಖಾಮುಖಿ**

**<><*<><>*><>**

ದೇಶದಲ್ಲಿ ಲೋಕಸಭಾ ಚುನಾವಣೆಯ ೬ನೇ ಹಂತದ ಮತದಾನ ನಾಳೆ ನಡೆಯಲಿದೆ. ಒಟ್ಟು ೫೮ ಕ್ಷೇತ್ರಗಳಿಗೆ ನಾಳೆ ಚುನಾವಣೆ ನಡೆಯಲಿದೆ. ಕೇಂದ್ರ ಚುನಾವಣಾ ಆಯೋಗವು ಮತದಾನಕ್ಕೆ ಸಕಲ ಸಿದ್ಧತೆಗಳನ್ನು ಮಾಡಿಕೊಂಡಿದೆ. ನಾಳೆ ಬೆಳಗ್ಗೆ ೭ ಗಂಟೆಯಿಂದ ಸಂಜೆ ೫ ಗಂಟೆ ವರೆಗೆ ಮತದಾನ ನಡೆಯಲಿದೆ. ಈ ಹಂತದಲ್ಲಿ ೮ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶ ಒಳಗೊಂಡಂತೆ ಒಟ್ಟು ೫೮ ಲೋಕಸಭಾ ಕ್ಷೇತ್ರಗಳಲ್ಲಿ ನಾಳೆ ಮತದಾನ ನಡೆಯಲಿದೆ. ಬಿಹಾರದ ೮, ಹರ್ಯಾಣದ ೧೦, ಜಾರ್ಖಂಡ್‌ನ ೪, ಒಡಿಶಾದ ೬, ಉತ್ತರಪ್ರದೇಶದ ೧೪, ಪಶ್ಚಿಮ ಬಂಗಾಳದ ೮, ದೆಹಲಿಯ ಎಲ್ಲಾ ೭ ಹಾಗೂ ಜಮ್ಮು-ಕಾಶ್ಮೀರದ ೧ ಕ್ಷೇತ್ರಗಳಲ್ಲಿ ಚುನಾವಣೆ ನಡೆಯಲಿದೆ. ಈ ಕ್ಷೇತ್ರಗಳಲ್ಲಿ ಒಟ್ಟು ೮೮೯ ಅಭ್ಯರ್ಥಿಗಳು ಕಣದಲ್ಲಿದ್ದಾರೆ.

**<><*<><>*><>**

ಇನ್ನು ಎಂಟು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ನಡೆಯಲಿರುವ ೭ನೇ ಹಾಗೂ ಕೊನೆಯ ಹಂತದ ಲೋಕಸಭಾ ಚುನಾವಣೆಗೆ ಒಟ್ಟು ೯೦೪ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಜೂನ್ ೧ ರಂದು ನಡೆಯಲಿರುವ ೫೭ ಲೋಕಸಭಾ ಕ್ಷೇತ್ರಗಳಿಗೆ ಒಟ್ಟು ೨ ಸಾವಿರದ ೧೦೫

ನಾಮಪತ್ರಗಳು ಸಲ್ಲಿಕೆಯಾಗಿವೆ. ನಾಮಪತ್ರಗಳ ಪರಿಶೀಲನೆ ನಂತರ ೯೫೪ ನಾಮಪತ್ರಗಳು ಕ್ರಮಬದ್ಧವಾಗಿವೆ ಎಂದು ಚುನಾವಣಾ ಆಯೋಗ ತಿಳಿಸಿದೆ. ಈ ಹಂತದಲ್ಲಿ ಚುನಾವಣೆ ನಡೆಯಲಿರುವ ಕ್ಷೇತ್ರಗಳಲ್ಲಿ ವಿವಿಧ ರಾಜಕೀಯ ಪಕ್ಷಗಳ ಮುಖಂಡರು ಬಿರುಸಿನ ಪ್ರಚಾರದಲ್ಲಿ ತೊಡಗಿದ್ದಾರೆ. ಪಂಜಾಬ್‌ನ ಗುರುದಾಸ್ ಪುರ ಜಿಲ್ಲೆಯ ದಿನಾನಗರದಲ್ಲಿ ನಡೆದ ಚುನಾವಣಾ ರ‍್ಯಾಲಿಯಲ್ಲಿ ಬಿಜೆಪಿ ಹಿರಿಯ ನಾಯಕ ಮತ್ತು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಭಾಗವಹಿಸಿದ್ದರು. ಈ ವೇಳೆ ರ‍್ಯಾಲಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ದೇಶದ ಭದ್ರತೆಗೆ ಐಎನ್‌ಡಿಐ ಮೈತ್ರಿಕೂಟ ದೊಡ್ಡ ಬೆದರಿಕೆಯಾಗಿದೆ. ಜಮ್ಮು ಮತ್ತು ಕಾಶ್ಮೀರದಲ್ಲಿ ೩೭೦ನೇ ವಿಧಿಯನ್ನು ಪುನಃ ಜಾರಿಗೆ ತರುವುದು ಕಾಂಗ್ರೆಸ್ ಪಕ್ಷದ ಕಾರ್ಯಸೂಚಿಯಾಗಿದೆ ಎಂದು ಆರೋಪಿಸಿದರು. ದೇಶದ ಜನರ ಕಣ್ಣಿಗೆ ಮಣ್ಣೆರಚಲು ಕಾಂಗ್ರೆಸ್ ಮತ್ತು ಆಮ್ ಆದ್ಮಿ ಪಕ್ಷ ಪ್ರಯತ್ನಿಸುತ್ತಿವೆ. ಪಂಜಾಬ್‌ನಲ್ಲಿ ಪರಸ್ಪರ ಆರೋಪ- ಪ್ರತ್ಯಾರೋಪ ಮಾಡುವ ಈ ಪಕ್ಷಗಳು, ದೆಹಲಿಯಲ್ಲಿ ಸ್ನೇಹಿತರಾಗಿದ್ದಾರೆ. ಕಾಂಗ್ರೆಸ್ ಮತ್ತು ಆಪ್ ಒಂದೇ ನಾಣ್ಯದ ಎರಡು ಮುಖಗಳು ಎಂಬುದು ಜನರಿಗೆ ಮನವರಿಕೆಯಾಗಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ದೂರಿದರು. ಜಾರ್ಖಂಡ್‌ನ ಜಮ್ತಾರಾದಲ್ಲಿ ನಡೆದ ಪ್ರಚಾರ ರ‍್ಯಾಲಿ ಉದ್ದೇಶಿಸಿ ಮಾತನಾಡಿದ ಕೇಂದ್ರ ಗೃಹ ಸಚಿವ ಮತ್ತು ಬಿಜೆಪಿ ಹಿರಿಯ ನಾಯಕ ಅಮಿತ್ ಶಾ, 'ರಾಜ್ಯದಲ್ಲಿ ಜಾರ್ಖಂಡ್ ಮುಕ್ತಿ ಮೋರ್ಚಾ ಮತ್ತು ಕಾಂಗ್ರೆಸ್ ಪಕ್ಷಗಳು ಭ್ರಷ್ಟಾಚಾರದಲ್ಲಿ ಪರಸ್ಪರ ಪೈಪೋಟಿಗಿಳಿದಿವೆ ಎಂದು ಆರೋಪಿಸಿದ್ದಾರೆ. ಜಾರ್ಖಂಡ್‌ನಲ್ಲಿ ಬುಡಕಟ್ಟು ಸಮುದಾಯ ಮತ್ತು ಸಂತಾಲ್ ಸಮುದಾಯದ ಅಭಿವೃದ್ಧಿಗಾಗಿ ಬಿಜೆಪಿ ಕೆಲಸ ಮಾಡಿದೆ. ಬಿಜೆಪಿ ಆಡಳಿತದಲ್ಲಿ ಸಂತಾಲಿ ಭಾಷೆಯನ್ನು ಸಂವಿಧಾನದ ೮ನೇ ಅನುಸೂಚಿಯಲ್ಲಿ ಸೇರಿಸಲಾಗಿದೆ ಎಂದು ಅಮಿತ್ ಶಾ ಹೇಳಿದ್ದಾರೆ. ರಾಜ್ಯದಲ್ಲಿ ಗೋವು ಕಳ್ಳಸಾಗಣೆ ಮಿತಿ ಮೀರಿದೆ. ಜಾರ್ಖಂಡ್‌ನಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದರೆ, ಇದನ್ನು ತಡೆಗಟ್ಟಲು ಕ್ರಮ ಕೈಗೊಳ್ಳಲಾಗುವುದು. ಗೋವು ಕಳ್ಳಸಾಗಣೆ ಸಂಪೂರ್ಣವಾಗಿ ತಡೆಗಟ್ಟುವ ನಿಟ್ಟಿನಲ್ಲಿ ಕಠಿಣ ಕಾನೂನು ಜಾರಿಗೆ ತರಲಾಗುವುದು ಎಂದು ಭರವಸೆ ನೀಡಿದ್ದಾರೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಕಳೆದ ೧೦ ವರ್ಷಗಳಲ್ಲಿ ಬುಡಕಟ್ಟು ಅಭಿವೃದ್ಧಿ ಇಲಾಖೆಗೆ ನೀಡುವ ಅನುದಾನವನ್ನು ದುಪ್ಪಟ್ಟು ಗೊಳಿಸಲಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಪಂಜಾಬ್‌ನ ಶ್ರೀ ಆನಂದ್‌ಪುರ್ ಸಾಹಿಬ್ ಕ್ಷೇತ್ರದಲ್ಲಿ ಪಕ್ಷದ ಅಭ್ಯರ್ಥಿ ಪರವಾಗಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ಸಚಿನ್ ಪೈಲೆಟ್ ಮತಯಾಚಿಸಿದರು. ಈ ವೇಳೆ ನಡೆದ ಚುನಾವಣಾ ರ‍್ಯಾಲಿಯನ್ನುದ್ದೇಶಿಸಿ ಮಾತನಾಡಿದ ಅವರು, ಕೇಂದ್ರ ತನಿಖಾ ತಂಡಗಳನ್ನು ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ದುರ್ಬಲಗೊಳಿಸಿದೆ. ಕೈಗಾರಿಕೋದ್ಯಮಗಳ ಪರವಾಗಿ ಇರುವ ಸರ್ಕಾರ ಸಾಮಾನ್ಯರನ್ನು ಮತ್ತಷ್ಟು ಬಡವರನ್ನಾಗಿಸಿದೆ ಎಂದು ಆರೋಪಿಸಿದರು. ಪಂಜಾಬ್‌ನಲ್ಲಿ ಆಮ್‌ಆದ್ಮಿ ನೇತೃತ್ವದ ಸರ್ಕಾರ ಜನರಿಗೆ ನೀಡಿದ್ದ ಭರವಸೆಯನ್ನು ಈಡೇರಿಸಲು ವಿಫಲವಾಗಿದೆ ಎಂದು ಸಚಿನ್ ಪೈಲೆಟ್ ದೂರಿದರು.

<><*<><>*><>

ಲೋಕಸಭಾ ಚುನಾವಣೆಯ ಮತದಾನದ ಮತಗಟ್ಟೆವಾರು ಅಂಕಿ ಅಂಶವನ್ನು ಚುನಾವಣಾ ಆಯೋಗದ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ಚುನಾವಣಾ ಆಯೋಗಕ್ಕೆ ನಿರ್ದೇಶನ ಕೋರಿ ಸಲ್ಲಿಸಿದ್ದ ಅರ್ಜಿ ಸಂಬಂಧ ಮಧ್ಯಂತರ ಆದೇಶ ನೀಡಲು ಸುಪ್ರೀಂ ಕೋರ್ಟ್ ನಿರಾಕರಿಸಿದೆ. ಮತದಾನ ನಡೆದು ೪೮ ಗಂಟೆಗಳೊಳಗಾಗಿ ಮತಗಟ್ಟೆವಾರು ಅಂಕಿ ಅಂಶವನ್ನು ಆಯೋಗದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ನಿರ್ದೇಶನ ನೀಡುವಂತೆ ಕೋರಿ ಅಸೋಸಿಯೇಶನ್ ಫಾರ್ ಡೆಮಾಕ್ರಟಿಕ್ ರಿಫಾರ್ಮ್ಸ್ ಸಂಸ್ಥೆ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್, ಈ ಆದೇಶ ನೀಡಿದೆ. ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ದೀಪಂಕರ್ ದತ್ತಾ ಮತ್ತು ಸತೀಶ್ ಚಂದ್ರ ಶರ್ಮಾ ಅವರನ್ನೊಳಗೊಂಡ ರಜಾ ಕಾಲದ ವಿಭಾಗೀಯ ಪೀಠ, ಈ ಕಾರ್ಯಕ್ಕಾಗಿ ಸಿಬ್ಬಂದಿ ನೇಮಕ ಮಾಡುವುದು ಚುನಾವಣಾ ಆಯೋಗಕ್ಕೆ ಕಷ್ಟವಾಗಲಿದೆ. ಐದು ಹಂತಗಳ ಮತದಾನ ಈಗಾಗಲೇ ನಡೆದಿದ್ದು, ಇನ್ನು ಎರಡು ಹಂತಗಳ ಮತದಾನ ಬಾಕಿ ಇರುವುದದರಿಂದ, ಈ ರೀತಿಯ ನಿರ್ದೇಶನ ನೀಡಲು ಸಾಧ್ಯವಿಲ್ಲ ಎಂದು ಹೇಳಿದೆ.

**<><*<><>*><>**

ದೆಹಲಿ ಲೆಫ್ಟಿನೆಂಟ್ ಗವರ್ನರ್ ವಿ.ಕೆ.ಸಕ್ಸೇನಾ ಅವರು ಹೂಡಿರುವ ಮಾನನಷ್ಟ ಮೊಕದ್ದಮೆ ಪ್ರಕರಣದಲ್ಲಿ ಸಾಮಾಜಿಕ ಕಾರ್ಯಕರ್ತೆ ಮೇಧಾ ಪಾಟ್ಕರ್ ಅವರನ್ನು ದೆಹಲಿ ನ್ಯಾಯಾಲಯ ದೋಷಿ ಎಂದು ಘೋಷಿಸಿದೆ.  ಖಾದಿ ಮತ್ತು ಗ್ರಾಮೋದ್ಯೋಗ ಆಯೋಗದ ಅಧ್ಯಕ್ಷರಾಗಿದ್ದ ವಿ.ಕೆ.ಸಕ್ಸೇನಾ ಮತ್ತು ನರ್ಮದಾ ಬಚಾವ್ ಆಂದೋಲನದ ಕಾರ್ಯಕರ್ತೆ ಮೇಧಾ ಪಾಟ್ಕರ್ ನಡುವೆ ಎರಡು ದಶಕಗಳ ಕಾಲ ನಡೆದ ಸುದೀರ್ಘ ಕಾನೂನು ಹೋರಾಟದಲ್ಲಿ ಇದು ಪ್ರಮುಖ ಬೆಳವಣಿಗೆಯಾಗಿದೆ. ತಮ್ಮ ಮತ್ತು ನರ್ಮದಾ ಬಚಾವ್ ಆಂದೋಲನದ ವಿರುದ್ಧ ಮಾನಹಾನಿಕರವಾದ ಜಾಹೀರಾತುಗಳನ್ನು ವಿ.ಕೆ.ಸಕ್ಸೇನಾ ಪ್ರಕಟಿಸಿದ್ದಾರೆ ಎಂದು ಮೇಧಾ ಪಾಟ್ಕರ್ ೨೦೦೦ನೇ ಇಸವಿಯಲ್ಲಿ ದಾವೆ ಹೂಡಿದ್ದರು, ಆಗ  ಸಕ್ಸೇನಾ ಅವರು ಅಹಮದಾಬಾದ್ ಮೂಲದ ಎನ್‌ಜಿಒ, ನ್ಯಾಷನಲ್ ಕೌನ್ಸಿಲ್ ಫಾರ್ ಸಿವಿಲ್ ಲಿಬರ್ಟೀಸ್‌ನ ಮುಖ್ಯಸ್ಥರಾಗಿದ್ದರು. ಇದಕ್ಕೆ ಪ್ರತಿಕ್ರಿಯೆಯಾಗಿ ಸಂದರ್ಶನವೊಂದರಲ್ಲಿ ಅವಹೇಳನಕಾರಿ ಹೇಳಿಕೆಗಳನ್ನು ನೀಡಿದ ಆರೋಪದಲ್ಲಿ ಮೇಧಾ ಪಾಟ್ಕರ್ ವಿರುದ್ಧ ಸಕ್ಸೇನಾ ಎರಡು ಮಾನನಷ್ಟ ಮೊಕದ್ದಮೆಗಳನ್ನು ದಾಖಲಿಸಿದ್ದರು.  ಅರ್ಜಿಗಳ ವಿಚಾರಣೆ ನಡೆಸಿದ ದೆಹಲಿ ನ್ಯಾಯಾಲಯ, ಮೇಧಾ ಪಾಟ್ಕರ್ ಅವರನ್ನು ದೋಷಿ ಎಂದು ಪರಿಗಣಿಸಿದ್ದು, ಶಿಕ್ಷೆಯನ್ನು ಕಾಯ್ದಿರಿಸಿದೆ.

**<><*<><>*><>**

ದೂರದರ್ಶನ ಕಿಸಾನ್ ಚಾನೆಲ್ ಇದೇ ಮೊದಲ ಬಾರಿಗೆ ಇಬ್ಬರು ಕೃತಕ ಬುದ್ಧಿಮತ್ತೆ ಸುದ್ದಿ ನಿರೂಪಕರನ್ನು ಅನಾವರಣಗೊಳಿಸಲು ಸಿದ್ಧವಾಗಿದೆ ಎಂದು ಕೇಂದ್ರ ಕೃಷಿ ಸಚಿವಾಲಯ ಮಾಹಿತಿ ನೀಡಿದೆ. ಎಐ ಕ್ರಿಶ್ ಮತ್ತು ಎಐ ಭೂಮಿ ಎಂಬ ಹೆಸರಿನ ಈ ಎಐ ನಿರೂಪಕರು ಇದೇ ೨೬ರಂದು ದೂರದರ್ಶನ ಕಿಸಾನ್ ಚಾನೆಲ್‌ನ ೯ನೇ ವಾರ್ಷಿಕೋತ್ಸವದಂದು ಸುದ್ದಿಗಳನ್ನು ಓದಲು

ಆರಂಭಿಸಲಿದ್ದಾರೆ. ಈ ಎಐ ನಿರೂಪಕರು ಭಾರತೀಯ ಹಾಗೂ ವಿದೇಶಿ ಸೇರಿ ಒಟ್ಟು ೫೦ ಭಾಷೆಗಳಲ್ಲಿ ಸುದಿ ವಾಚನ ಮಾಡಲಿದ್ದಾರೆ. ಜತೆಗೆ ಯಾವುದೇ ಆಯಾಸವಿಲ್ಲದೇ ದಿನದ ೨೪ ಗಂಟೆ ಸುದ್ದಿಗಳನ್ನು ವಾಚಿಸುವ ಸಾಮರ್ಥ್ಯ ಹೊಂದಿದ್ದಾರೆ. ದೇಶಾದ್ಯಂತ ಪ್ರಾದೇಶಿಕ ಭಾಷೆಗಳಲ್ಲಿ ಕೃಷಿ ಸಂಬಂಧಿತ ಮಾಹಿತಿ, ಕೃಷಿ ಸಂಶೋಧನೆ, ಹವಾಮಾನ ಮುನ್ಸೂಚನೆ ಹಾಗೂ ಸರ್ಕಾರದ ಯೋಜನೆಗಳ ಕುರಿತ ಮಾಹಿತಿಯನ್ನು ರೈತರಿಗೆ ತಲುಪಿಸಲಿದ್ದಾರೆ ಎಂದು ಸಚಿವಾಲಯ ತಿಳಿಸಿದೆ.

**<><*<><>*><>**

ಪಂಜಾಬ್, ಹರ್ಯಾಣ, ರಾಜಸ್ಥಾನ, ಗುಜರಾತ್ ಮತ್ತು ಪಶ್ಚಿಮ ಮಧ್ಯಪ್ರದೇಶದಲ್ಲಿ ಮುಂದಿನ ಐದು ದಿನಗಳು ತಾಪಮಾನ ತೀವ್ರವಾಗಿ ಏರಿಕೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮಾಹಿತಿ ನೀಡಿದೆ. ಈ ಕುರಿತು ಆಕಾಶವಾಣಿಗೆ ಮಾಹಿತಿ ನೀಡಿದ ಭಾರತೀಯ ಹವಾಮಾನ ಇಲಾಖೆಯ ಹಿರಿಯ ವಿಜ್ಞಾನಿ ಆರ್.ಕೆ.ಜೆನಮಣಿ, ಈ ಪ್ರದೇಶದಲ್ಲಿ ತಾಪಮಾನ ೪೪ ಡಿಗ್ರಿ ಸೆಲ್ಶಿಯಸ್‌ನಿಂದ ೪೮ ಡಿಗ್ರಿ ಸೆಲ್ಶಿಯಸ್ ಇರಲಿದೆ. ಈ ಕಾರಣಕ್ಕೆ ಈ ಪ್ರದೇಶಗಳಲ್ಲಿ ರೆಡ್ ಮತ್ತು ಆರೆಂಜ್ ಅಲರ್ಟ್ ಘೋಷಿಸಲಾಗಿದೆ ಎಂದು ತಿಳಿಸಿದ್ದಾರೆ. ಕರ್ನಾಟದಲ್ಲಿ ಮುಂದಿನ ೨೪ ಗಂಟೆಗಳಲ್ಲಿ ದಕ್ಷಿಣ ಕನ್ನಡ, ಉಡುಪಿ, ಧಾರವಾಡ, ಹಾವೇರಿ, ಶಿವಮೊಗ್ಗ, ಚಿಕ್ಕಮಗಳೂರು, ಚಿತ್ರದುರ್ಗ, ಮೈಸೂರು, ತುಮಕೂರು, ಕೊಡುಗು ಜಿಲ್ಲೆಯಲ್ಲಿ ಧಾರಾಕಾರ ಮಳೆಯಾಗುವ ಸಂಭವವಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

**<><*<><>*><>**

ಮುಂಬೈ ಮಾರುಕಟ್ಟೆಯಲ್ಲಿಂದು ಮುಂಬೈ ಷೇರು ಸಂವೇದಿ ಸೂಚ್ಯಂಕ- ಸೆನ್ಸೆಕ್ಸ್ ಮತ್ತು ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ಕೊಂಚ ಇಳಿಕೆ ಕಂಡಿದೆ. ಸೆನ್ಸೆಕ್ಸ್ ೮ ಅಂಕಗಳು ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೭೫ ಸಾವಿರದ ೪೧೦ ಅಂಕಗಳು ದಾಖಲಾಗಿದೆ. ಅದೇ ರೀತಿ ನಿಫ್ಟಿ-೧೧ ಅಂಕಗಳು ಇಳಿಕೆಯಾಗಿ, ದಿನದ ಅಂತ್ಯಕ್ಕೆ ೨೨ ಸಾವಿರದ ೯೫೭ ಅಂಕಗಳು ದಾಖಲಾಗಿದೆ. ಡಾಲರ್ ಎದುರು ರೂಪಾಯಿ ಮೌಲ್ಯ ೮೩ ರೂಪಾಯಿ ೧೦ ಪೈಸೆ ರಷ್ಟಾಗಿದೆ.

**<><*<><>*><>**

ಚೆನ್ನೈನ ಎಂ. ಚಿದಂಬರಂ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಐಪಿಎಲ್ ಟಿ-೨೦ ಟೂರ್ನಿಯ ೨ನೇ ಕ್ವಾಲಿಫೈಯರ್ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ಮತ್ತು ಸನ್ ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿಯಾಗಿವೆ. ಈ ಪಂದ್ಯದಲ್ಲಿ ಗೆದ್ದ ತಂಡ, ಫೈನಲ್ ಪ್ರವೇಶಿಸಲಿದೆ. ಟಾಸ್ ಗೆದ್ದ ರಾಜಸ್ಥಾನ್ ರಾಯಲ್ಸ್ ತಂಡ ಬೌಲಿಂಗ್ ಆಯ್ಕೆ ಮಾಡಿಕೊಂಡಿದೆ. ಈಗಾಗಲೇ ಮೊದಲ ಕ್ವಾಲಿಫೈಯರ್ ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ವಿರುದ್ಧ ಗೆಲುವು ಸಾಧಿಸಿರುವ ಕೊಲ್ಕೊತ್ತಾ ನೈಟ್ ರೈಡರ್ಸ್ ಫೈನಲ್ ಪ್ರವೇಶಿಸಿದೆ. ಫೈನಲ್ ಪಂದ್ಯ ಇದೇ ೨೬ರ ಭಾನುವಾರದಂದು ನಡೆಯಲಿದೆ.

**<><*<><>*><>**

ದಕ್ಷಿಣ ಕೊರಿಯಾದ ಯಚೆಯೋನ್‌ನಲ್ಲಿ ನಡೆಯುತ್ತಿರುವ ಅರ್ಚರಿ ವಿಶ್ವಕಪ್‌ನ ೨ನೇ ಹಂತದ ಪಂದ್ಯಾವಳಿಯ ಮಿಕ್ಸಡ್ ಟೀಮ್ ವಿಭಾಗದಲ್ಲಿ ಭಾರತದ ಜ್ಯೋತಿ ಸುರೇಖಾ ವೆನ್ನಮ್ ಮತ್ತು ಪ್ರಿಯಾಂಶ್ ಫೈನಲ್ಸ್ ಪ್ರವೇಶಿಸಿದ್ದಾರೆ. ನಾಳೆ ನಡೆಯಲಿರುವ ಫೈನಲ್ ಪಂದ್ಯದಲ್ಲಿ ಜ್ಯೋತಿ ಮತ್ತು ಪ್ರಿಯಾಂಶ್, ಅಮೆರಿಕದ ಒಲಿವಿಯಾ ಡೀನ್ ಮತ್ತು ಸಾಯರ್ ಸುಲ್ಲಿವನ್ ಅರನ್ನು ಎದುರಿಸಲಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಿಗ್ಗೆ ೭.೩೫ ಕ್ಕೆ <>*><>**